Kannada Prabha Page 01 14/03/2017

# ರೈತರ ₹25000 ಸಾಲ ಮನ್ನಾ?

## ನಾಳೆಯ ರಾಜ್ಯ ಬಜೆಟ್‌ನಲ್ಲಿ ಘೋಷಣೆ ಸಾಧ್ಯತೆ ಸಾಲಮನ್ನಾ ಆದರೆ 10 ಲಕ್ಷ ರೈತರಿಗೆ ಅನುಕೂಲ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದ ರೈತರನ್ನು ಸತತ ಬರಗಾಲ ತೀವ್ರವಾಗಿ ಬಾಧಿಸುತ್ತಿರುವ ಹಿನ್ನೆಲೆಯಲ್ಲಿ ಕೃಷಿಕರು ಪಡೆದ ಬೆಳೆಸಾಲವನ್ನು ಮನ್ನಾ ಮಾಡಲು ಭಾರಿ ಒತ್ತಡ ಎದುರಿಸುತ್ತಿರುವ ರಾಜ್ಯ ಸರ್ಕಾರ ಈ ಬಾರಿಯ ಬಜೆಟ್‌ನಲ್ಲಿ ಸಹಕಾರ ಬ್ಯಾಂಕ್‌ಗಳಲ್ಲಿ ರೈತರು ಪಡೆದ ಬೆಳೆಸಾಲವನ್ನು ತಲಾ ರೈತರ ₹25 ಸಾವಿರ ರು.ಗಳಿಗೆ ಮಿತಿಗೊಳಿಸಿ ಮನ್ನಾ ಮಾಡುವ ಸಾಧ್ಯತೆ ಹೆಚ್ಚಿದೆ.

ಇದಲ್ಲದೆ, ಪರಿಶಿಷ್ಟರಿಗೆ ಉಚಿತ ವಿದ್ಯುತ್ ಸೌಲಭ್ಯ, ರಾಜ್ಯದ ನಗರ ಪ್ರದೇಶಗಳಲ್ಲಿ 7 ಲಕ್ಷ ಮನೆಗಳ ನಿರ್ಮಾಣ ಮತ್ತು ಬೆಂಗಳೂರು ನಗರದ ಸಮೀಪ ಎರಡು ಉಪ ನಗರಗಳನ್ನು ನಿರ್ಮಿಸುವ ಮೂಲಕ ತಮ್ಮ ನೆಚ್ಚಿನ ಅಹಿಂದ ವರ್ಗ ಹಾಗೂ ನಗರ ಪ್ರದೇಶದ ಮತದಾರರ



ನಡುವೆ ಸಮತೋಲನ ಸಾಧಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಾಗಿದ್ದಾರೆ. ಈ ಮೂಲಕ ಮುಂದಿನ ವಿಧಾನಸಭಾ ಚುನಾವಣೆಗೆ ಗ್ರಾಮೀಣ ಮತ್ತು ನಗರ ಪ್ರದೇಶಗಳಿಗೆ ಸಮಾನ ಆದ್ಯತೆ ಕೊಡುವುದು ಮತ್ತು ಅಹಿಂದ ಮತಗಳನ್ನು ಗಟ್ಟಿಗೊಳಿಸುವುದು ಮುಖ್ಯ ಉದ್ದೇಶವಾಗಿದೆ ಎನ್ನಲಾಗುತ್ತಿದೆ.

ಈ ಪೈಕಿ ರೈತರ ಸಾಲ ಮನ್ನಾ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಗಂಭೀರ ಚಿಂತನೆ ನಡೆಸಿದ್ದು, ಮಾ.15ರಂದು ಬಜೆಟ್‌ನಲ್ಲಿ ಬೆಳೆಸಾಲ 25 ಸಾವಿರ ರು.ಗಳವರೆಗೆ ಮನ್ನಾ ಮಾಡುವ ಸಾಧ್ಯತೆ ಹೆಚ್ಚಿದೆ ಎಂದು ಉನ್ನತ ಮೂಲಗಳು ತಿಳಿಸಿವೆ. ರಾಜ್ಯದ 23.79 ಲಕ್ಷ ಕೃಷಿಕರು 10,551.99 ಕೋಟಿ ರು.ಗಳ ಬೆಳೆಸಾಲವನ್ನು ಸಹಕಾರ ಬ್ಯಾಂಕ್‌ಗಳಿಂದ ಪಡೆದುಕೊಂಡಿದ್ದಾರೆ. ಈ ಪೈಕಿ ಪ್ರತಿಯೊಬ್ಬ ರೈತರ ₹25 ಸಾವಿರವರೆಗೆ ಸಾಲದ ಅಸಲು ಮನ್ನಾ ಮಾಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ಇದರಿಂದ ಸುಮಾರು 10 ಲಕ್ಷ ರೈತರ ಸಂಪೂರ್ಣ ಸಾಲ ಮನ್ನಾ ಆಗಲಿದ್ದು, ಉಳಿದ ರೈತರು ತಮ್ಮ ಸಾಲದ ಬಾಬ್ತಿನಲ್ಲಿ ₹25 ಸಾವಿರ ಮನ್ನಾ ಆಗುವ ಲಾಭ ಪಡೆಯಲಿದ್ದಾರೆ. ಈ ಮೂಲಕ ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಕೆಲಮಟ್ಟಿನ ಅನುಕೂಲ ಆಗಲಿದೆ ಎಂಬುದು ಸರ್ಕಾರದ ಉದ್ದೇಶ.

**ವಸತಿಗೆ ಅತಿ ಹೆಚ್ಚು ಆದ್ಯತೆ:** ರಾಜ್ಯದಲ್ಲಿ ಅಧಿಕಾರಕ್ಕೆ ಬರುವ ಮುನ್ನ ಪ್ರಣಾಳಿಕೆಯಲ್ಲಿ ನೀಡಿದ್ದ 165 ಭರವಸೆಗಳಲ್ಲಿ ಶೇ.70ರಷ್ಟು ಈಡೇರಿಸುವ ಮೂಲಕ ನುಡಿದಂತೆ ನಡೆದಿದ್ದೇವೆ ಎಂದು ಪದೇ ಪದೇ ಸಿಎಂ ಸಿದ್ದರಾಮಯ್ಯ ಹೇಳುತ್ತಿದ್ದಾರೆ. ಆದರೆ ಈ ಮಾತು ವಸತಿ ಇಲಾಖೆ ವಿಚಾರದಲ್ಲಿ ಪಾಲನೆಯಾಗಿಲ್ಲ. ಪ್ರಣಾಳಿಕೆಯಲ್ಲಿ ಐದು ವರ್ಷದಲ್ಲಿ 15 ಲಕ್ಷ ಮನೆ ನಿರ್ಮಿಸುವುದಾಗಿ ಘೋಷಿಸಲಾಗಿತ್ತು. 

14

Kannada Prabha P. 01

## ಎಸ್‌ಸಿ, ಎಸ್‌ಟಿಗೆ ಉಚಿತ ವಿದ್ಯುತ್?

ರಾಜ್ಯದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನರಿಗಾಗಿ ವಿಶೇಷ ಯೋಜನೆಯೊಂದನ್ನು ರಾಜ್ಯ ಘೋಷಿಸಲಿದೆ ಎಂದು ನಿರೀಕ್ಷಿಸಲಾಗುತ್ತಿದೆ. 2011ರ ಜನಗಣತಿ ಅನುಸಾರ 1.04 ಕೋಟಿ ಪರಿಶಿಷ್ಟ ಜಾತಿ ಮತ್ತು 42.48 ಲಕ್ಷ ಪರಿಶಿಷ್ಟ ಪಂಗಡದ ಜನರಿದ್ದಾರೆ. ಈ ಪೈಕಿ ಬಡತನ ರೇಖೆಗಿಂತ ಕೆಳಗಿನ ಪರಿಶಿಷ್ಟ ಜಾತಿಯ 4.30 ಲಕ್ಷ ಹಾಗೂ ಪರಿಶಿಷ್ಟ ಪಂಗಡದ 2.70 ಲಕ್ಷ ಕುಟುಂಬಗಳಿಗೆ ಉಚಿತ ವಿದ್ಯುತ್ ಯೋಜನೆ ಘೋಷಣೆಯಾಗುವ ಸಾಧ್ಯತೆ ಇದೆ. ಅಂದರೆ ಸುಮಾರು 7 ಲಕ್ಷ ದಲಿತ ಕುಟುಂಬಗಳಿಗೆ ಉಚಿತ ವಿದ್ಯುತ್ ಸಿಗಲಿದ್ದು, ಇದರಿಂದ 35 ಲಕ್ಷ ಫಲಾನುಭವಿಗಳು ಲಾಭ ಪಡೆಯಲಿದ್ದಾರೆ. ಈ ಮೂಲಕ ವಿಶೇಷವಾಗಿ ಗ್ರಾಮೀಣ ಪ್ರದೇಶದ ಕಡುಬಡವರಾಗಿರುವ ದಲಿತ ಕುಟುಂಬಗಳಿಗೆ ಉಚಿತ ವಿದ್ಯುತ್ ನೀಡಲು ಸರ್ಕಾರ ಮುಂದಾಗಿದೆ ಎಂದೇ ಹೇಳಲಾಗುತ್ತಿದೆ.

**ಬೆಂಗಳೂರು ಬಳಿ 2 ಕ್ಲಸ್ಟರ್ ಸಿಟಿ ಅಭಿವೃದ್ಧಿ ಘೋಷಣೆ?** 14

14/03/2017 Page 14 K.P.

# ₹25000 ಸಾಲ ಮನ್ನಾ?

ಮೊದಲ ಪುಟದಿಂದ

ಆದರೆ ಈವರೆಗೆ ಕೇವಲ 8 ಲಕ್ಷ ಮನೆಗಳ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ. ವಸತಿ ಕ್ಷೇತ್ರದಲ್ಲಿ ನಿರೀಕ್ಷಿತ ಪ್ರಮಾಣದ ಸಾಧನೆಯಾಗಿಲ್ಲ ಎಂಬ ಕೊರಗು ಸರ್ಕಾರಕ್ಕೆ ಇದ್ದೇ ಇದೆ. ಹೀಗಾಗಿ ಉಳಿದಿರುವ ಒಂದು ವರ್ಷದಲ್ಲಿ ಉಳಿದ 7 ಲಕ್ಷ ಮನೆಗಳ ನಿರ್ಮಾಣಕ್ಕೆ ಚಾಲನೆ ನೀಡಲು ಸರ್ಕಾರ ಗಂಭೀರ ಚಿಂತನೆ ನಡೆಸಿದೆ. ಹೀಗಾಗಿ ಇತಿಹಾಸದಲ್ಲೇ ವಸತಿ ಇಲಾಖೆಗೆ ನೀಡದಷ್ಟು ಅತಿ ಹೆಚ್ಚು ಅನುದಾನ ನೀಡುವ ಮೂಲಕ ಭರವಸೆಯಂತೆ 15 ಲಕ್ಷ ಮನೆಗಳ ನಿರ್ಮಾಣದ ಗುರಿ ತಲುಪಲು ಬಜೆಟ್‌ನಲ್ಲಿ ಯೋಜನೆ ಘೋಷಣೆ ಮಾಡಲಾಗುತ್ತದೆ ಎಂದು ಸರ್ಕಾರದ ಉನ್ನತ ಮೂಲಗಳು ಸುಳಿವು ನೀಡಿವೆ.

**ಬೆಂಗಳೂರು ಸಮೀಪ ಎರಡು ಕ್ಲಸ್ಟರ್ ಸಿಟಿ?:** ದಶಕಗಳಿಂದ ನೆನೆಗುದಿಗೆ ಬಿದ್ದಿರುವ ಬೆಂಗಳೂರು ಸುತ್ತ ಏಳು ಕ್ಲಸ್ಟರ್ ಸಿಟಿಗಳ ನಿರ್ಮಾಣದ ಯೋಜನೆಗೆ ಮುಖ್ಯಮಂತ್ರಿ ಹೊಸ ಸ್ವರೂಪದ ಮೂಲಕ ಘೋಷಣೆ ಮಾಡುವ ನಿರೀಕ್ಷೆ ಇದೆ. ಸುಮಾರು 3,500 ಕೋಟಿ ರು. ಅಂದಾಜು ವೆಚ್ಚದಲ್ಲಿ ದೇವನಹಳ್ಳಿಯ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಈಗಾಗಲೇ ಕ್ಲಸ್ಟರ್ ಸಿಟಿ ನಿರ್ಮಾಣಕ್ಕೆ ಸಂಬಂಧಿಸಿ ಯೋಜನಾ ವರದಿ ಸಿದ್ಧಪಡಿಸುತ್ತಿದ್ದು, ಒಟ್ಟು 30 ಸಾವಿರ ಕೋಟಿ ರು. ವೆಚ್ಚ ಆಗಲಿದೆ. ಆ ಪೈಕಿ ಎರಡು ಕ್ಲಸ್ಟರ್ ಸಿಟಿಗಳನ್ನು ಈ ಬಾರಿಯ ಬಜೆಟ್‌ನಲ್ಲಿ ಘೋಷಣೆ ಮಾಡುವ ಸಾಧ್ಯತೆ ಇದೆ. ಎರಡು ಕ್ಲಸ್ಟರ್ ಸಿಟಿಗಳನ್ನು ಅಭಿವೃದ್ಧಿಪಡಿಸುವ ಮೂಲಕ ಬೆಂಗಳೂರು ನಗರದ ದಟ್ಟಣೆ ಕಡಿಮೆ ಮಾಡುವುದು ಸರ್ಕಾರದ ಉದ್ದೇಶವಾಗಿದೆ.

ಒಂದೆಡೆ ಸಾಮಾಜಿಕ ಸುರಕ್ಷಾ ಯೋಜನೆಗಳನ್ನು ಮುಂದುವರಿಸಿ, ಅವುಗಳ ಪಟ್ಟಿಗೆ ಸಾಲ ಮನ್ನಾ ಹಾಗೂ ಪರಿಶಿಷ್ಟರಿಗೆ ಉಚಿತ ವಿದ್ಯುತ್ ಯೋಜನೆಗಳನ್ನು ಸೇರ್ಪಡೆ ಮಾಡುವ ಮೂಲಕ ಅಹಿಂದ ವರ್ಗದ ಮೇಲಿನ ಹಿಡಿತ ಕಾಯ್ದುಕೊಳ್ಳುವುದು ಸಿಎಂ ಸಿದ್ದರಾಮಯ್ಯ ಉದ್ದೇಶವಾಗಿದ್ದರೆ ಮತ್ತೊಂದೆಡೆ, ನಗರದ ಪ್ರದೇಶದ ಬಡ ಮತ್ತು ಮಧ್ಯಮ ವರ್ಗಗಳ ಎಲ್ಲ ಜಾತಿಯ ಜನರಿಗೆ ವಸತಿ ಕಾರ್ಯಕ್ರಮ ರೂಪಿಸುವ ಮೂಲಕ ಇತರ ಸಮುದಾಯಗಳನ್ನೂ ಸೆಳೆಯುವ ಗುರಿ ಹೊಂದಿದ್ದಾರೆ. ಹಾಗೆಯೇ ವಿಶ್ವದ ಕ್ರಿಯಾಶೀಲ ನಗರ ಎಂಬ ಖ್ಯಾತಿಗೆ ಭಾಜನವಾಗಿರುವ ಬೆಂಗಳೂರು ನಗರದ ಅಭಿವೃದ್ಧಿಗೂ ತಾವು ಬದ್ಧ ಎಂಬುದನ್ನು ಸಾಧಿಸಲು ಸಿದ್ದರಾಮಯ್ಯ ಹೊರಟಿದ್ದಾರೆ. ಅದಕ್ಕಾಗಿ ಬಜೆಟ್‌ನಲ್ಲಿ ಮಹತ್ವಾಕಾಂಕ್ಷಿ ಯೋಜನೆಗಳನ್ನೂ ಘೋಷಿಸಲಿದ್ದಾರೆ ಎನ್ನುತ್ತವೆ ಸರ್ಕಾರದ ಉನ್ನತ ಮೂಲಗಳು.

V.K. 14.3.17

## ಬೆಸ್ಕಾಂನಿಂದ ಶುಲ್ಕ ವಸೂಲು ಮಾಡಿ

''ಕೆಇಆರ್‌ಸಿ ನಿಯಮಗಳ ಪ್ರಕಾರ ಬೃಹತ್ ಕಟ್ಟಡಗಳು ಮತ್ತು ಅಪಾರ್ಟ್‌ಮೆಂಟ್‌ಗಳು ತಮ್ಮ ಜಾಗದಲ್ಲಿಯೇ ಟ್ರಾನ್ಸ್‌ಫಾರ್ಮರ್ ಅಳವಡಿಕೆಗೆ 15 ಮೀಟರ್ ಜಾಗ ಒದಗಿಸಬೇಕಿದೆ. ಆದರೆ, ಶೇ 90ರಷ್ಟು ಕಟ್ಟಡಗಳು ಜಾಗ ಕೊಡುತ್ತಿಲ್ಲ, ಹೀಗಾಗಿ, ಬೆಸ್ಕಾಂ ಪಾದಚಾರಿ ಮಾರ್ಗದಲ್ಲಿಯೇ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸುತ್ತಿದೆ. ಇದರಿಂದ ಆ ಸ್ಥಳಗಳು ಕಸದ ತೊಟ್ಟಿಗಳಾಗಿವೆ,'' ಎಂದು ಪ್ರತಿಪಕ್ಷ ನಾಯಕ ಪದ್ಮನಾಭರೆಡ್ಡಿ ಕಿಡಿಕಾರಿದರು. ''ಪಾದಚಾರಿ ಮಾರ್ಗದಲ್ಲಿ ಟ್ರಾನ್ಸ್‌ಫಾರ್ಮರ್ ಅಳವಡಿಸಿರುವ ಬಗ್ಗೆ ತನಿಖೆ ನಡೆಸಲು ಸಮಿತಿಯೊಂದನ್ನು ರಚಿಸಬೇಕು. ಫುಟ್‌ಪಾತ್ ಮತ್ತು ರಸ್ತೆ ಹಾಳು ಮಾಡಿರುವುದಕ್ಕೆ ಶುಲ್ಕ ವಸೂಲಿ ಮಾಡಬೇಕು. ಎಲ್ಲೆಡೆ ಒಂದೇ ವಿದ್ಯುತ್ ಕಂಬದಲ್ಲಿ ಟ್ರಾನ್ಸ್‌ಫಾರ್ಮರ್ ಅಳವಡಿಸಬೇಕು. ಬೆಸ್ಕಾಂ ಸಿಬ್ಬಂದಿಯು 30/40 ಅಳತೆಯ ನಿವೇಶನಗಳಿಂದ 12 ಸಾವಿರ ರೂ. ಲಂಚ ಪಡೆದು ಲೂಟಿ ಮಾಡುತ್ತಿದ್ದಾರೆ,'' ಎಂದು ಆರೋಪಿಸಿದರು.